86
152ನೇ/6

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಾದ ಶ್ರೀ ಎಸ್.ವಿ.ಸಂಕನೂರ ಹಾಗೂ ಶ್ರೀಮತಿ ಭಾರತಿ ಶೆಟ್ಟಿ ಅವರುಗಳು ನಿಯಮ 72 ರ ಅಡಿಯಲ್ಲಿ ಗಮನ ಸೆಳೆಯುವ ಸೂಚನೆ ಸಂಖ್ಯೆ:86ರಲ್ಲಿ ಕೇಳಿರುವ ಪ್ರಶ್ನೆಗೆ ಉತ್ತರ.**

**ಸೂಚನೆ:**

ಉತ್ತರ ಕನ್ನಡ ಜಿಲ್ಲೆಯ ಬನವಾಸಿಯು ಕನ್ನಡದ ಮೊದಲ ಅರಸರಾದ ಕದಂಬರ ರಾಜಧಾನಿಯಾಗಿದ್ದು ಆದರೆ ಬನವಾಸಿ ಗ್ರಾಮವು ಪ್ರವಾಸೋದ್ಯಮದಲ್ಲಿ ಯಾವುದೇ ಅಭಿವೃದ್ಧಿ ಕಾಣದಂತಾಗಿರುತ್ತದೆ, ಮುಖ್ಯವಾಗಿ ಬನವಾಸಿ ಗ್ರಾಮದ ಅತ್ಯಂತ ಪ್ರಮುಖ ದೇವಸ್ಥಾನವಾದ ಮಧುಕೇಶ್ವರ ದೇವಸ್ಥಾನವು ಮಳೆಗಾಲದಲ್ಲಿ ಸಂಪೂರ್ಣವಾಗಿ ಸೋರುತ್ತಿದೆ ಹಾಗೂ ದೇವಸ್ಥಾನ ವೀಕ್ಷಿಸಲು ಪ್ರತಿ ನಿತ್ಯ ದೂರದ ಊರಿನಿಂದ ಸಾವಿರಾರು ಪ್ರವಾಸಿಗರು ಬರುತ್ತಿದ್ದಾರೆ, ಆದರೆ ಸದರಿ ಪ್ರವಾಸಿಗರಿಗೆ ಯಾವುದೇ ಮೂಲಭೂತ ಸೌಲಭ್ಯವಿರುವುದಿಲ್ಲ, ಅದರಲ್ಲಿಯೂ ಬಹು ಮುಖ್ಯವಾಗಿ ದೇವಸ್ಥಾನ ಸಮೀಪ ಸಾರ್ವಜನಿಕ ಶೌಚಾಲಯವಿಲ್ಲದೆ ಪ್ರವಾಸಿಗರು ದೇವಸ್ಥಾನ ಸಮೀಪದ ಮನೆಯವರಲ್ಲಿ ಕೋರಿ ಶೌಚಾಲಯ ಉಪಯೋಗಿಸುತ್ತಿರುವುದು ದುರದೃಷ್ಟಕರ, ಇದರಿಂದ ಪ್ರವಾಸಿಗರಿಗೆ/ಮಹಿಳೆಯರಿಗೆ ಹಾಗೂ ಸ್ಥಳೀಯರಿಗೂ ತುಂಬಾ ತೊಂದರೆಯಾಗುತ್ತಿದೆ. ಈ ಕುರಿತು ಸ್ಥಳೀಯರು ಹಲವಾರು ಬಾರಿ ಸರ್ಕಾರಕ್ಕೆ ಮನವಿ ಮಾಡಿದರು ಯಾವುದೇ ಪ್ರಯೋಜನವಾಗಿರುವುದಿಲ್ಲ. ಈ ಕುರಿತು ಪ್ರವಾಸೋದ್ಯಮ ಇಲಾಖೆಯಿಂದ ಕೂಡಲೇ ಸೂಕ್ತ ಕ್ರಮ ಕೈಗೊಳ್ಳುವಂತೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರ ಗಮನ ಸೆಳೆಯ ಬಯಸುತ್ತೇನೆ.

*******

**ಉತ್ತರ:**

ಉತ್ತರ ಕನ್ನಡ ಜಿಲ್ಲೆಯ ಪ್ರೇಕ್ಷಣೀಯ ಸ್ಥಳಗಳ ಆಕರ್ಷಣೆಗೆ ಹಾಗೂ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲು, ಕರ್ನಾಟಕ ಪ್ರವಾಸೋದ್ಯಮ ನೀತಿ 2020-26ರ ಅಡಿ ಉತ್ತರ ಕನ್ನಡ ಜಿಲ್ಲೆಯನ್ನು ಆದ್ಯತಾ ಪ್ರವಾಸಿ ತಾಣವನ್ನಾಗಿ ಗುರುತಿಸಲಾಗಿದೆ.

ಉತ್ತರ ಕನ್ನಡ ಜಿಲ್ಲೆಯ ಬನವಾಸಿಯಲ್ಲಿ ಈ ಕೆಳಕಂಡ ಮೂಲಸೌಲಭ್ಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ.

1. 2010-11ನೇ ಸಾಲಿನಲ್ಲಿ ಶಿರಸಿ ತಾಲ್ಲೂಕಿನ ಹೊಸನಗರ ರಾಜ್ಯ ಹೆದ್ದಾರಿಯಿಂದ ಶ್ರೀಮಧುಕೇಶ್ವರ ದೇವಾಲಯದ ರಥಬೀದಿವರೆಗಿನ ಸಂಪರ್ಕ ರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ರೂ.133.50 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಂಡು ಪೂರ್ಣಗೊಳಿಸಲಾಗಿದೆ.

2. 2012-13ನೇ ಸಾಲಿನಲ್ಲಿ ನಬಾರ್ಡ್ ಯೋಜನೆಯಡಿ ಇಲಾಖೆಯಿಂದ ಶಿರಸಿ ತಾಲ್ಲೂಕಿನ ರಾಜ್ಯ ಹೆದ್ದಾರಿ-77 ರಿಂದ ಬನವಾಸಿ ಟೌನ್‌ನಲ್ಲಿರುವ ಮಧುಕೇಶ್ವರ ದೇವಸ್ಥಾನಕ್ಕೆ ಹೋಗುವ 6.34 ಕಿ.ಮೀ. ಉದ್ದದ ಕೂಡುರಸ್ತೆ ಅಭಿವೃದ್ಧಿ ಕಾಮಗಾರಿಯನ್ನು ರೂ.442.57 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಂಡು ಪೂರ್ಣಗೊಳಿಸಲಾಗಿದೆ.

3. 2014-15ನೇ ಸಾಲಿನಲ್ಲಿ ಉತ್ತರ ಕನ್ನಡ ಜಿಲ್ಲೆಯ ಬನವಾಸಿಯಲ್ಲಿ ಪ್ರವಾಸಿಗರ ಅನುಕೂಲಕ್ಕಾಗಿ 06 ಕೊಠಡಿಗಳುಳ್ಳ ಯಾತ್ರಿ ನಿವಾಸ ನಿರ್ಮಾಣ ಕಾಮಗಾರಿಯನ್ನು ರೂ.39.10 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಂಡು ಪೂರ್ಣಗೊಳಿಸಲಾಗಿದೆ.

4. 2017-18ನೇ ಸಾಲಿನಲ್ಲಿ ಉತ್ತರ ಕನ್ನಡ ಜಿಲ್ಲೆಯ ಶಿರಸಿ ತಾಲ್ಲೂಕಿನ ಬನವಾಸಿ ಕದಂಬೋತ್ಸವ ಬೈಪಾಸ್ ರಸ್ತೆ ಸುಧಾರಣೆ ಕಾಮಗಾರಿಯನ್ನು ರೂ.125.35 ಲಕ್ಷಗಳ ಅಂದಾಜು ವೆಚ್ಚದಲ್ಲಿ ಕೈಗೊಂಡು ಪೂರ್ಣಗೊಳಿಸಲಾಗಿದೆ.

--2

5. ಉತ್ತರ ಕನ್ನಡ ಜಿಲ್ಲೆಯ ಪ್ರವಾಸೋದ್ಯಮವನ್ನು ಉತ್ತೇಜಿಸಲು ಬನವಾಸಿ ಕದಂಬೋತ್ಸವಕ್ಕೆ 2019-20ನೇ ಸಾಲಿನಲ್ಲಿ ರೂ.40.00 ಲಕ್ಷಗಳನ್ನು 2022-23ನೇ ಸಾಲಿನಲ್ಲಿ ರೂ.50.00 ಲಕ್ಷಗಳ ಅನುದಾನವನ್ನು ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು, ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ, ಉತ್ತರ ಕನ್ನಡ ಜಿಲ್ಲೆರವರಿಗೆ ಬಿಡುಗಡೆ ಮಾಡಲಾಗಿದೆ.

ದೇವಸ್ಥಾನಗಳ ದುರಸ್ಥಿ ಕಾಮಗಾರಿಗಳು ಪ್ರವಾಸೋದ್ಯಮ ಇಲಾಖೆಯ ವ್ಯಾಪ್ತಿಗೆ ಒಳಪಡುವುದಿಲ್ಲ.ಮಧುಕೇಶ್ವರ ದೇವಸ್ಥಾನವು ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆಯ ವ್ಯಾಪ್ತಿಗೆ ಒಳಪಡುವುದರಿಂದ, ದೇವಸ್ಥಾನದ ಬಳಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಸಾಧ್ಯವಾಗಿರುವುದಿಲ್ಲ.

TOR 57 TDV 2024

(ಎಚ್.ಕೆ.ಪಾಟೀಲ)
ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ
ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ
ಪ್ರವಾಸೋದ್ಯಮ ಸಚಿವರು